# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 902
ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ
ಉತ್ತರಿಸುವ ದಿನಾಂಕ : 14-07-2023
ಉತ್ತರಿಸುವ ಸಚಿವರು : ಮಾನ್ಯ ಪರಿಶಿಷ್ಟ ಪಂಗಡಗಳ ಕಲ್ಯಾಣ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಚಾಮರಾಜನಗರ, ಮೈಸೂರು ಜಿಲ್ಲಾ ಅರಣ್ಯ ಪ್ರದೇಶದ ಅಂಚಿನಲ್ಲಿ ವಾಸಿಸುವ ಬುಡಕಟ್ಟು ಹಾಗೂ ಇತರೆ ಪರಿಶಿಷ್ಟ ಪಂಗಡದವರಿಗೆ ನೀಡಲಾಗುತ್ತಿರುವ ವಿಶೇಷ ಸವಲತ್ತುಗಳಾವುವು; (ವಿವರವಾದ ಮಾಹಿತಿ ನೀಡುವುದು) | **ಚಾಮರಾಜನಗರ ಜಿಲ್ಲೆ:-**<br>1. ಅರಣ್ಯ ಹಕ್ಕು ಕಾಯ್ದೆಯಡಿಯಲ್ಲಿ 2059 ವೈಯಕ್ತಿಕ ಹಾಗೂ 77 ಸಮುದಾಯ ಹಕ್ಕು ಪತ್ರಗಳನ್ನು ನೀಡಲಾಗಿದೆ.<br>2. ಬುಡಕಟ್ಟು ಜನಾಂಗದವರಿಗೆ ಪೌಷ್ಠಿಕ ಆಹಾರ ಪದಾರ್ಥಗಳ ವಿತರಣೆ<br>3. ಭಾರತ ಸಂವಿಧಾನ ಅನುಚ್ಛೇಧ 275(1)ರಡಿ, ಹೈನುಗಾರಿಕೆ, ಕುರಿ/ಮೇಕೆ ಸಾಕಾಣಿಕೆ ಘಟಕ, ಕೋಳಿ ಸಾಕಾಣಿಕೆ ಘಟಕ, ಸರಕು ಸಾಗಾಣಿಕೆ ವಾಹನ ಘಟಕ, ಹನಿನೀರಾವರಿ ಘಟಕಗಳನ್ನು ಸಹಾಯಧನದೊಂದಿಗೆ ವಿತರಣೆ ಮಾಡಲಾಗುತ್ತಿದೆ.<br>4. ಜೇನುಕುರುಬ ಜನಾಂಗದವರಿಗೆ ನಿರುದ್ಯೋಗಿ ಭತ್ಯೆ ಮತ್ತು ಶೈಕ್ಷಣಿಕ ಪ್ರೋತ್ಸಾಹಧನ<br>**ಮೈಸೂರು ಜಿಲ್ಲೆ:-**<br>1. ಅರಣ್ಯ ಹಕ್ಕು ಕಾಯ್ದೆಯಡಿಯಲ್ಲಿ 772 ವೈಯಕ್ತಿಕ ಹಾಗೂ 38 ಸಮುದಾಯ ಹಕ್ಕು ಪತ್ರಗಳನ್ನು ನೀಡಲಾಗಿದೆ.<br>2. ಬುಡಕಟ್ಟು ಜನಾಂಗದವರಿಗೆ ಪೌಷ್ಠಿಕ ಆಹಾರ ಪದಾರ್ಥಗಳ ವಿತರಣೆ<br>3. ಭಾರತ ಸಂವಿಧಾನ ಅನುಚ್ಛೇಧ 275(1)ರಡಿ, ಹೈನುಗಾರಿಕೆ, ಕುರಿ/ಮೇಕೆ ಸಾಕಾಣಿಕೆ ಘಟಕ, ಕೋಳಿ ಸಾಕಾಣಿಕೆ ಘಟಕ, ಸರಕು ಸಾಗಾಣಿಕೆ ವಾಹನ ಘಟಕ, ಹನಿನೀರಾವರಿ ಘಟಕಗಳನ್ನು ಸಹಾಯಧನದೊಂದಿಗೆ ವಿತರಣೆ ಮಾಡಲಾಗುತ್ತಿದೆ.<br>4. ಜೇನುಕುರುಬ ಜನಾಂಗದವರಿಗೆ ಮನೆ ನಿರ್ಮಾಣ<br>5. ಜೇನುಕುರುಬ ಜನಾಂಗದವರಿಗೆ ನಿರುದ್ಯೋಗಿ ಭತ್ಯೆ ಮತ್ತು ಶೈಕ್ಷಣಿಕ ಪ್ರೋತ್ಸಾಹಧನ |
| ಆ) | ಸದರಿ ಭಾಗದಲ್ಲಿ ವಾಸಿಸುವವರಿಗೆ ಇರುವ ಮೂಲ ಸೌಲಭ್ಯಗಳ ಕೊರತೆಗಳಾವುವು; (ವಿವರವಾದ ಮಾಹಿತಿ ನೀಡುವುದು) | ಬುಡಕಟ್ಟು ಜನಾಂಗದವರಿಗೆ ಹೊಸ ಮನೆಗಳ ನಿರ್ಮಾಣ, ರಸ್ತೆ, ಕುಡಿಯುವ ನೀರು, ವಿದ್ಯುತ್ ಸಂಪರ್ಕ ಕಲ್ಪಿಸಬೇಕಾಗಿದೆ. |
| ಇ) | ಸದರಿ ಮೂಲ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಕೈಗೊಂಡಿರುವ ತುರ್ತು ಕ್ರಮಗಳೇನು; (ವಿವರವಾದ ಮಾಹಿತಿ ನೀಡುವುದು) | 2022-23ನೇ ಸಾಲಿನಲ್ಲಿ ಅಲೆಮಾರಿ, ಅರೆ ಅಲೆಮಾರಿ ಮತ್ತು ಸೂಕ್ಷ್ಮ, ಅತಿಸೂಕ್ಷ್ಮ ಜನಾಂಗದವರಿಗೆ ಮೂಲಭೂತ ಸೌಕರ್ಯ ಒದಗಿಸಲು ಚಾಮರಾಜನಗರ ಮತ್ತು ಮೈಸೂರು ಜಿಲ್ಲೆಗಳಿಗೆ ಈ ಕೆಳಕಂಡಂತೆ ಅನುದಾನ ಬಿಡುಗಡೆ ಮಾಡಲಾಗಿದೆ. |

(ರೂ.ಲಕ್ಷಗಳಲ್ಲಿ)

| ಕ್ರ. ಸಂ | ಜಿಲ್ಲೆ | ಮಂಜೂರಾತಿ ನೀಡಿದ ಅನುದಾನ | ಬಿಡುಗಡೆ ಮಾಡಿದ ಅನುದಾನ |
|---|---|---|---|
| 1. | ಚಾಮರಾಜನಗರ | 50.00 | 25.00 |
| 2. | ಮೈಸೂರು | 350.00 | 175.00 |
| | ಒಟ್ಟು | **400.00** | **200.00** |

| | | |
|---|---|---|
| ಈ) | ಸದರಿ ಭಾಗದಲ್ಲಿ ವಾಸಿಸುವ ವಿದ್ಯಾರ್ಥಿಗಳ ಶಿಕ್ಷಣಕ್ಕಾಗಿ ಕಲ್ಪಿಸಲಾಗಿರುವ ವಿಶೇಷ ಸೌಲಭ್ಯಗಳೇನು; | ಪರಿಶಿಷ್ಟ ವರ್ಗದ ಜನಾಂಗದ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗಾಗಿ ಸರ್ಕಾರ ಹಮ್ಮಿಕೊಂಡ ಯೋಜನೆಗಳ ವಿವರ ಕೆಳಕಂಡಂತಿದೆ.<br>1. ವಿದ್ಯಾರ್ಥಿಗಳ ಶಿಕ್ಷಣಕ್ಕಾಗಿ ವಾಲ್ಮೀಕಿ ಆಶ್ರಮ ಶಾಲೆ, ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯ, ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ನೀಡಲಾಗುತ್ತದೆ.<br>2. ವಸತಿ ಶಾಲೆಗಳು.<br>3. ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮಂಜೂರು ಮಾಡಲಾಗುತ್ತಿದೆ.<br>4. ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮಂಜೂರು ಮಾಡಲಾಗುತ್ತಿದೆ.<br>5. ಎಸ್. ಎಸ್. ಎಲ್.ಸಿ/ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ಪ್ರಥಮ ದರ್ಜೆ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ.<br>6. ಪ್ರತಿಷ್ಠಿತ ಶಾಲೆಗಳಲ್ಲಿ ಪ್ರವೇಶಾವಕಾಶ ಕಾರ್ಯಕ್ರಮ.<br>7. ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ಶಿಕ್ಷಣ ಪಡೆಯಲು ಪ್ರಬುದ್ಧ ಯೋಜನೆಯಡಿ ಧನಸಹಾಯ.<br>8. ರಾಷ್ಟ್ರೀಯ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ಧನಸಹಾಯ.<br>9. ವಿಶ್ವವಿದ್ಯಾಲಯ ಮಟ್ಟದಲ್ಲಿ 1 ರಿಂದ 5ನೇ Rank ಪಡೆದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ.<br>10. ನೈಜ, ದುರ್ಬಲ ಬುಡಕಟ್ಟು ಸಮುದಾಯದವರ ಶೈಕ್ಷಣಿಕ ಪ್ರೋತ್ಸಾಹಧನ ಹಾಗೂ ನಿರುದ್ಯೋಗಿ ಜೀವನ ಭತ್ಯೆ ಕಾರ್ಯಕ್ರಮ.<br>11. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪರೀಕ್ಷಾ ಪೂರ್ವ ತರಬೇತಿ ಯೋಜನೆ. |
| ಉ) | ಸದರಿಯವರು ವಾಸಿಸುವ ಸ್ಥಳಗಳಲ್ಲಿ ಕಾಡು ಪ್ರಾಣಿಗಳ ಹಾವಳಿಯನ್ನು ತಪ್ಪಿಸಲು ಹೈ ಮಾಸ್ಟ್ ಲೈಟ್ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ; | ಹೌದು.<br>ಅನುದಾನ ಲಭ್ಯತೆ ಅನುಗುಣವಾಗಿ ಬುಡಕಟ್ಟು ಜನಾಂಗದವರು ವಾಸಿಸುವ ಕಾಲೋನಿ/ಪೋಡುಗಳಲ್ಲಿ ಸೋಲಾರ್ ಬೀದಿ ದೀಪಗಳನ್ನು ಅಳವಡಿಸಲು ಕ್ರಮವಹಿಸಲಾಗುವುದು. |
| ಊ) | ಹೌದಾದಲ್ಲಿ, ಯಾವ ಕಾಲಮಿತಿಯಲ್ಲಿ ಹೈ ಮಾಸ್ಟ್ ಲೈಟ್ ಸೌಲಭ್ಯಗಳನ್ನು ಕಲ್ಪಿಸಲಾಗುವುದು? | |

**ಸಕಇ-ಎಸ್‌ಟಿಪಿ/115/2023**

(ಬಿ.ನಾಗೇಂದ್ರ)
ಪರಿಶಿಷ್ಟ ಪಂಗಡಗಳ ಕಲ್ಯಾಣ,
ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.